ಕರ್ನಾಟಕ ಸರ್ಕಾರ

**ಜುಲೈ 12, 2017**

## ಹನ್ನೊಂದು ಸಾವಿರಕ್ಕೂ ಹೆಚ್ಚು ಪೌರ ಕಾರ್ಮಿಕರ ಹುದ್ದೆಗಳ ಭರ್ತಿಗೆ ವಿಶೇಷ ನೇಮಕಾತಿ ನಿಯಮಗಳಿಗೆ ಸಂಪುಟ ಅನುಮೋದನೆ : ಟಿ ಬಿ ಜಯಚಂದ್ರ

ಬೆಂಗಳೂರು, ಜುಲೈ 12:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯೂ ಒಳಗೊಂಡಂತೆ ಎಲ್ಲಾ ನಗರ ಸಂಸ್ಥೆಗಳಲ್ಲಿ ಖಾಲಿ ಇರುವ ಹನ್ನೊಂದು ಸಾವಿರಕ್ಕೂ ಹೆಚ್ಚು ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳಿಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಇದರ ಜೊತೆಗೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸ್ಥಳೀಯ ಸಂಸ್ಥೆಗಳಿಂದ ನೇರವಾಗಿ ಸಂಭಾವನೆಯನ್ನು ಅವರ ಖಾತೆಗಳಿಗೆ ಪಾವತಿ ಮಾಡಲೂ ಸಹ ಸಂಪುಟ ಸಮ್ಮತಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯ ನಂತರ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ ಬಿ. ಜಯಚಂದ್ರ ಅವರು ಈ ವಿಷಯವನ್ನು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಖಾಯಂಗೊಂಡ ಪ್ರತಿ ಪೌರಕಾರ್ಮಿಕರಿಗೆ 25,000 ರೂ ಹಾಗೂ ನೇರವಾಗಿ ಹೊರ ಗುತ್ತಿಗೆಯ ಮೇರೆಗೆ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ ಮಾಸಿಕ 17,000 ರೂ ನಂತೆ ಮಾಸಿಕ ಸಂಭಾವನೆಯನ್ನು ಸಂಬಂಧಿತರ ಖಾತೆಗೆ ನೇರವಾಗಿ ಪಾವತಿಸಲು ನಿರ್ಧರಿಸಲಾಗಿದೆ. ಇದರಿಂದ ರಾಜ್ಯ ಬೊಕ್ಕಸಕ್ಕೆ ವಾರ್ಷಿಕವಾಗಿ ಸುಮಾರು 336 ಕೋಟಿ ರೂ ಹೊರೆ ಬೀಳಲಿದೆ. ಗುತ್ತಿಗೆ ಆಧಾರದ ಮೇರೆಗೆ ಕಾರ್ಯ ನಿರ್ವಹಿಸುವ ಸಿಬ್ಬಂದಿಯನ್ನೂ ಖಾಯಂ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

### ಲೋಕಾಯುಕ್ತದಿಂದ ವಿಶೇಷ ತನಿಖಾ ತಂಡಕ್ಕೆ ಪ್ರಕರಣಗಳ ಹಸ್ತಾಂತರ

ಅಕ್ರಮ ಗಣಿಗಾರಿಕೆಯ ಎಲ್ಲಾ ಪ್ರಕರಣಗಳನ್ನು ಲೋಕಾಯುಕ್ತ ಸಂಸ್ಥೆಯಿಂದ ವಿಶೇಷ ತನಿಖಾ ತಂಡಕ್ಕೆ ವಹಿಸಲು ಸಚಿವ ಸಂಪುಟ ಘಟನೋತ್ತರ ಅನುಮೋದನೆ ನೀಡಿದೆ. ಇದೀಗ ವಿವಿಧ ನ್ಯಾಯಾಲಯಗಳಲ್ಲಿದ್ದ ಏಳು ಪ್ರಕರಣಗಳನ್ನೂ ವಿಶೇಷ ತನಿಖಾ ತಂಡಕ್ಕೆ ಒಪ್ಪಿಸುವ ಮೂಲಕ ಲೋಕಾಯುಕ್ತ 1 ಮತ್ತು 2 ವರದಿಯ ಎಲ್ಲಾ ಪ್ರಕರಣಗಳು ಭಾರತ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ತನಿಖೆಗೆ ಒಳಪಡಿಸಲು ಸಮ್ಮತಿಸಲಾಗಿದೆ ಎಂದರು.

## ನಿವೃತ್ತ ಪೊಲೀಸರಿಗೂ ಆರೋಗ್ಯ ಭಾಗ್ಯ !

ರಾಜ್ಯದ ಪೊಲೀಸ್ ಇಲಾಖೆಯ ನಿವೃತ್ತ ನೌಕರರು ಮತ್ತು ಅವರ ಕುಟುಂಬದವರಿಗೆ ನಿವೃತ್ತ ಪೊಲೀಸ್ ಸಿಬ್ಬಂದಿಗಳ ಆರೋಗ್ಯ ಯೋಜನೆಗೆ 20 ಕೋಟಿ ರೂ. ಅನುದಾನ ಬಿಡುಗಡೆ ಮಾಡಲು ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ.

## ವೆನ್‌ಲಾಕ್ ಮೇಲ್ದರ್ಜೆಗೆ

ಮಂಗಳೂರಿನ ವೆನ್‌ಲಾಕ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ 100 ಹಾಸಿಗೆಯುಳ್ಳ ಜನರಲ್ ಮೆಡಿಸನ್ ಸೂಪರ್ ಸ್ಪೆಷಾಲಿಟಿ ವಿಭಾಗದ ಕಟ್ಟಡ ನಿರ್ಮಾಣ ಕಾಮಗಾರಿಯ 10 ಕೋಟಿ ರೂ. ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಮಾಂಜ್ರಾ ನದಿಗೆ ಸೇತುವೆ

ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಕೊಂಗಳಿ ಗ್ರಾಮದ ಹತ್ತಿರ ಮಾಂಜ್ರಾ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿಯನ್ನು 11.01 ಕೋಟಿ ರೂ. ಪರಿಷ್ಕೃತ ಅಂದಾಜು ಮೊತ್ತಕ್ಕೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮಾಂಜ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಮಾಣಿಕೇಶ್ವರ ಬ್ಯಾರೇಜ್‌ನಿಂದ 1.119 ಟಿ. ಎಂ. ಸಿ ಮತ್ತು ಹಾಲಳ್ಳಿ ಬ್ಯಾರೇಜ್‌ನಿಂದ 1.050 ಟಿ. ಎಂ.ಸಿ ಪ್ರಮಾಣದ ನೀರನ್ನು ಎತ್ತಿ ಕಾರಂಜಾ ಬಲದಂಡೆ ಕಾಲುವೆಯ ಅಂಚಿನ ವ್ಯಾಪ್ತಿಯಲ್ಲಿರುವ ಅಚ್ಚುಕಟ್ಟು ಪ್ರದೇಶಗಳಿಗೆ ಕ್ರಮವಾಗಿ 65.97 ಕೋಟಿ ರೂ. ಹಾಗೂ 60.88 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನೀರು ಒದಗಿಸುವ ಯೋಜನೆಗೆ ಸಂಪುಟವು ಒಪ್ಪಿಗೆ ನೀಡಿದೆ.

## ನ್ಯಾಯಾಲಯ ಸಂಕೀರ್ಣ

ಬಳ್ಳಾರಿ ನಗರದ ಪಾರ್ವತಿನಗರ ಬಡಾವಣೆಯಲ್ಲಿ ನ್ಯಾಯಾಲಯ ಸಂಕೀರ್ಣ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪರಿಷ್ಕೃತ ಅಂದಾಜು 75.42 ಕೋಟಿ ರೂ. ಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

ರಾಜ್ಯದಲ್ಲಿ ವಿಧಾನ ಪರಿಷತ್ತಿನ ಸೃಜನೆ, ರದ್ಧತಿ ಮತ್ತು ರಚನೆಯ ಕುರಿತಂತೆ ಸಿಬ್ಬಂದಿ, ಸಾರ್ವಜನಿಕ ಕುಂದು ಕೊರತೆಗಳು, ಕಾನೂನು ಮತ್ತು ನ್ಯಾಯ ಇಲಾಖೆಗೆ ಸಂಬಂಧಿತ ಸಂಸದೀಯ ಸ್ಥಾಯಿ ಸಮಿತಿಯ ಶಿಫಾರಸ್ಸಿಗೆ ಬದಲಾಗಿ ಯಥಾ ಸ್ಥಿತಿ ಕಾಯ್ದುಕೊಳ್ಳಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

## ಬೋಧನಾ ಶುಲ್ಕವನ್ನು ಉಳಿಸಿಕೊಳ್ಳಲು ಅನುಮೋದನೆ

ರಾಜ್ಯದಲ್ಲಿರುವ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ತರಬೇತುದಾರರಿಂದ ವಸೂಲು ಮಾಡಿರುವ 35.83 ಕೋಟಿ ರೂ. ಬೋಧನಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡುವ ಬದಲು ಸಂಸ್ಥೆಗಳಲ್ಲಿಯೇ ಉಳಿಸಿಕೊಳ್ಳಲು ಹಾಗೂ ಇನ್ನು ಮುಂದೆ ಬೋಧನಾ ಶುಲ್ಕವನ್ನು ಅನುದಾನಿತ ಸಂಸ್ಥೆಗಳಲ್ಲಿಯೇ ಉಳಿಸಿಕೊಳ್ಳಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವರು ತಿಳಿಸಿದರು.

## ಹದಿನೈದು ಕೆರೆಗಳಿಗೆ ನೀರು

ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಜಮಖಂಡಿ ಗ್ರಾಮದ ಬಳಿ ಮಾಂಜ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಕೊಂಗಳಿ ಬ್ಯಾರೇಜ್‌ನಿಂದ ನೀರನ್ನು ಎತ್ತಿ ಚುಲ್ಕನಾಲಾ ಜಲಾಶಯ ಮತ್ತು ಬಸವ ಕಲ್ಯಾಣ ತಾಲ್ಲೂಕಿನ 15 ಕೆರೆಗಳನ್ನು ತುಂಬಿಸುವ 188 ಕೋಟಿ ರೂ. ಅಂದಾಜು ವೆಚ್ಚಕ್ಕೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಹಾವೇರಿ ಜಿಲ್ಲೆಯ ರಾಣಿಬೆನ್ನೂರು ತಾಲ್ಲೂಕಿನ ರಾಣಿಬೆನ್ನೂರು ದೊಡ್ಡಕೆರೆ ಹಾಗೂ ಸುತ್ತಮುತ್ತಲಿನ ಮೂರು ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ 31 ಕೋಟಿ ರೂ. ಅಂದಾಜು ಮೊತ್ತದ ಯೋಜನೆಗೆ ಸಂಪುಟವು ಆಡಳಿತಾತ್ಮಕ ಒಪ್ಪಿಗೆ ನೀಡಿದೆ ಎಂದು ಸಚಿವ ಜಯಚಂದ್ರ ಹೇಳಿದರು.

## ಇ-ಆಸ್ಪತ್ರೆ ಯೋಜನೆ

ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಇರುವ ಆಸ್ಪತ್ರೆಗಳನ್ನು ಇ-ಆಸ್ಪತ್ರೆ ಯೋಜನೆಯನ್ನು ಅನುಷ್ಠಾನಗೊಳಿಸುವ ಮೂಲಕ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾಗಿರುವ ಎಲ್ಲಾ ರೋಗಿಗಳಿಗೂ ಉತ್ತಮ ಚಿಕಿತ್ಸೆ ನೀಡುವ ಹಾಗೂ ಆನ್‌ಲೈನ್ ಮೂಲಕ ಮಾಹಿತಿಯನ್ನು ವಿನಿಮಯ ಮಾಡುವ ಯೋಜನೆಗೆ ರಾಜ್ಯ ಸರ್ಕಾರ 9.65 ಕೋಟಿ ರೂ ವೆಚ್ಚ ಮಾಡಲು ಸಂಪುಟ ನಿರ್ಧರಿಸಿದೆ.

ಅಲ್ಲದೆ, ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆಯಡಿ ರೋಗ ಪತ್ತೆ ಹಚ್ಚುವ ಡಯಾಗ್ನೋಸ್ಟಿಕ್ ಉಪಕರಣಗಳನ್ನು ಖರೀದಿಸಲು ತಗಲುವ ಹೆಚ್ಚುವರಿ ವೆಚ್ಚವನ್ನು ಕೇಂದ್ರ ಸರ್ಕಾರ ಪಾವತಿಸಲು ಮುಂದಾಗಿದೆ. ಈ ಕ್ರಮಕ್ಕೆ ಸಂಪುಟ ಸಮ್ಮತಿಸಿದೆ.

## ಸನಿವಾಸ ಪ್ರಥಮ ದರ್ಜೆ ಮಹಾವಿದ್ಯಾಲಯಗಳಿಗೆ ಕಟ್ಟಡ

ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಜಿಲ್ಲೆಗಳಾದ ಕೋಲಾರ, ಚಿತ್ರದುರ್ಗ, ಹಾವೇರಿ, ಚಾಮರಾಜ ನಗರ, ರಾಯಚೂರು, ಕೊಪ್ಪಳ, ವಿಜಯಪುರ ಹಾಗೂ ಬೀದರ್ ಜಿಲ್ಲೆಗಳಲ್ಲಿ ತಲಾ 25 ಕೋಟಿ ರೂ ನಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸನಿವಾಸ ಪ್ರಥಮ ದರ್ಜೆ ಮಹಾವಿದ್ಯಾಲಯದ ಕಟ್ಟಡ ನಿರ್ಮಾಣ ಮಾಡಲು

**ಒಟ್ಟಾರೆ 250 ಕೋಟಿ ರೂ ವೆಚ್ಚ ಮಾಡಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಜಯಚಂದ್ರ ಅವರು ವಿವರಿಸಿದರು.**

***********

**ಡಿ ಪಿ ಎಂ : ಕೆ ಪಿ ಪಿ**